# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ | : | 699 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 11.12.2023 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಬಡವರಿಗೆ ಬಿ.ಪಿ.ಎಲ್ ಕಾರ್ಡ್‌ಗಳನ್ನು ನೀಡಲು ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆಯೇ; ಇದ್ದಲ್ಲಿ, ಯಾವಾಗಿನಿಂದ, ಇಲ್ಲವಾದಲ್ಲಿ ಯಾವ ಕಾರಣದಿಂದ ನೀಡಲಾಗುತ್ತಿಲ್ಲ; ಯಾವಾಗ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗುವುದು; (ಮಾಹಿತಿ ನೀಡುವುದು) | ರಾಜ್ಯದಲ್ಲಿ ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಕೆಯಾಗಿರುವ 2,95,986 ಅರ್ಜಿಗಳನ್ನು ವಿಲೇವಾರಿ ಮಾಡಲು ಸರ್ಕಾರದ ಆದೇಶ ಸಂಖ್ಯೆ:ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರಲ್ಲಿ ಅನುಮೋದನೆ ನೀಡಲಾಗಿದೆ. ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ ಅರ್ಜಿಗಳಲ್ಲಿನ ಮಾಹಿತಿಯ ಸತ್ಯಾಸತ್ಯತೆ ಹಾಗೂ ವಾಸಸ್ಥಳ ಪರಿಶೀಲನೆ ಕೈಗೊಂಡು ಅರ್ಹ ಅರ್ಜಿದಾರರಿಗೆ ಅರ್ಜಿ ಸಲ್ಲಿಸಿರುವ ದಿನಾಂಕದ ಹಿರಿತನದ ಮೇಲೆ ಪಡಿತರ ಚೀಟಿಯನ್ನು ವಿಲೇವಾರಿ ಮಾಡಲು ಅನುಮೋದನೆ ನೀಡಿರುವಂತೆ ಈವರೆಗೆವಿಗೂ 19,889 ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲಾಗಿದ್ದು, ಉಳಿದ ಅರ್ಜಿಗಳನ್ನು ವಿಲೇವಾರಿ ಮಾಡುವ ಕಾರ್ಯ ಪ್ರಗತಿಯಲ್ಲಿದೆ.. |
| ಆ | ಬಳ್ಳಾರಿ-ವಿಜಯನಗರ ಜಿಲ್ಲೆಗಳಲ್ಲಿ ಇಲ್ಲಿಯವರಗೆ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ನೀಡಲಾಗಿದೆ; ಕಳೆದ ಎರಡು ವರ್ಷಗಳಲ್ಲಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಬಿ.ಪಿ.ಎಲ್ ಕಾರ್ಡ್ ನೀಡಿರುವ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು) | ಬಳ್ಳಾರಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ 2,99,696 ಆದ್ಯತಾ (ಬಿ.ಪಿ.ಎಲ್) ಪಡಿತರ ಚೀಟಿಗಳನ್ನು ವಿತರಿಸಲಾಗಿದೆ. ಕಳೆದ ಎರಡು ವರ್ಷದಲ್ಲಿ ಬಂದ ಅರ್ಜಿಗಳ ಸಂಖ್ಯೆ 21,672. ಈ ಪೈಕಿ 8621 ಪಡಿತರ ಚೀಟಿಗಳನ್ನು ವಿತರಿಸಲಾಗಿದೆ ಹಾಗೂ 4312 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 8739 ಅರ್ಜಿಗಳಿಗೆ ಸಂಬಂಧಿಸಿದಂತೆ ಸ್ಥಳ ಪರಿಶೀಲನೆ ಕೈಗೊಂಡು ಅರ್ಹ ಅರ್ಜಿದಾರರಿಗೆ ಅರ್ಜಿ ಸಲ್ಲಿಸಿರುವ ದಿನಾಂಕದ ಹಿರಿತನದ ಮೇಲೆ ಪಡಿತರ ಚೀಟಿಯನ್ನು ವಿಲೇವಾರಿ ಮಾಡಲು ಕ್ರಮವಹಿಸಲಾಗುತ್ತದೆ.<br>ವಿಜಯನಗರ ಜಿಲ್ಲೆಯಲ್ಲಿ ಇಲ್ಲಿಯವರೆಗೆ 2,99,206 ಆದ್ಯತಾ (ಬಿ.ಪಿ.ಎಲ್) ಪಡಿತರ ಚೀಟಿಗಳನ್ನು |

| | | |
|---|---|---|
| | | ವಿತರಿಸಲಾಗಿದೆ. ಕಳೆದ ಎರಡು ವರ್ಷದಲ್ಲಿ ಬಂದ ಅರ್ಜಿಗಳ ಸಂಖ್ಯೆ 7265, ಅವುಗಳಲ್ಲಿ 495 ಆದ್ಯತಾ (ಬಿ.ಪಿ.ಎಲ್) ಕಾರ್ಡ್‌ಗಳನ್ನು ನೀಡಲಾಗಿದೆ. ಹಾಗೂ 82 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 6688 ಅರ್ಜಿಗಳಿಗೆ ಸಂಬಂಧಿಸಿದಂತೆ ಸ್ಥಳ ಪರಿಶೀಲನೆ ಕೈಗೊಂಡು ಅರ್ಹ ಅರ್ಜಿದಾರರಿಗೆ ಅರ್ಜಿ ಸಲ್ಲಿಸಿರುವ ದಿನಾಂಕದ ಹಿರಿತನದ ಮೇಲೆ ಪಡಿತರ ಚೀಟಿಯನ್ನು ವಿಲೇವಾರಿ ಮಾಡಲು ಕ್ರಮವಹಿಸಲಾಗುತ್ತದೆ. |
| ಇ | ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡ್‌ಗಾಗಿ ಅರ್ಜಿ ಸಲ್ಲಿಸಲು ಸಾರ್ವಜನಿಕರು ನಿರೀಕ್ಷಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವಾಗ ಅರ್ಜಿ ಸ್ವೀಕರಿಸಿ ಹೊಸ ಕಾರ್ಡ್‌ಗಳನ್ನು ನೀಡಲಾಗುವುದು? (ವಿವರ ನೀಡುವುದು) | ಬಂದಿರುತ್ತದೆ.<br>ರಾಜ್ಯದಲ್ಲಿ ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಕೆಯಾಗಿರುವ 2,95,986 ಅರ್ಜಿಗಳನ್ನು ವಿಲೇವಾರಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಕ್ರಮವಹಿಸಲಾಗುತ್ತದೆ. |

**ಸಂಖ್ಯೆ: ಆನಾಸ 274 ಡಿಆರ್‌ಎ 2023**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು